**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1807/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪ್ರವೀಣ್ | ಫ್ರಾಸಾ-4 |
| ತಂದೆಯ ಹೆಸರು | : ಪದ್ಮಯ್ಯ | ಚಾಸಾ-2 |
| ವಯಸ್ಸು | : 26 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 04.06.2026 |
| ವಾಸಸ್ಥಳ | : ಗೌರಿಕೆರೆ, ನಂದೀಪುರ | |

**:ಮುಖ್ಯ ವಿಚಾರಣೆ: ಫ್ರಾಜ್ಞಾ್ಯ.ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-2 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-4 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-5 ರ ಫೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಂ.ಒ.1 ರ ಮೇಲಿನ ತಮ್ಮ ಸಹಿಯನ್ನು ಗುರುತಿಸಿ ಸದರಿ ವಸ್ತು ಹಾಗೂ ಎಂ.ಒ.2 ರ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯ ಸಹಿಯನ್ನು ಎಂ.ಒ.1(ಸಿ) ಎಂದು ಗುರುತಿಸಲಾಯಿತು.

3 ವರ್ಷದ ಹಿಂದೆ ನಾನು ಮತ್ತು ಫ್ರಾಸಾ-2 ರವರು ಹಳೇಕೋಟೆಯಲ್ಲಿ ಕೆಲಸ ಮುಗಿಸಿಕೊಂಡು ಬರುವಾಗ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾವು ಸಹಿ ಮಾಡುವ ಕಾಲಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-4 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞಾ್ಯ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞಾ್ಯ.ಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-4 ರಲ್ಲಿನ ಸಂಪೂರ್ಣ ವಿಚಾರವನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಅಲ್ಲಗಳೆಯುತ್ತಾರೆ. ಎಂ.ಒ.1 ರಿಂದ 3 ನ್ನು ಪೋಲಿಸರು ನನ್ನ ಹಾಗೂ ಫ್ರಾಸಾ-2 ರವರ ಸಮಕ್ಷಮ 1 ನೇ ಆರೋಪಿಯ ಸ್ವಾಧೀನದಿಂದ ನಿಪಿ-4 ರ ಮಹಜರ್ ನಡಿ ವಶಕ್ಕೆ ಪಡೆದಿದ್ದಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.